# ಕರ್ನಾಟಕ ಸರ್ಕಾರ
# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ,

**ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003**

**ಸಂಖ್ಯೆ: ಕ್ಯೂ9/ಕೆ.ಓ.ಎಸ್/ಪರೀಕ್ಷೆ/ಮಾರ್ಚ್/ಏಪ್ರಿಲ್-2019/ಫಲಿತಾಂಶ/83/2018-19** **ದಿನಾಂಕ:09.05.2019**

## ಸುತ್ತೋಲೆ

**ವಿಷಯ:** ಮಾರ್ಚ್/ಏಪ್ರಿಲ್-2019ರ ಮಾಹೆಯಲ್ಲಿ ನಡೆದ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

*******

ಮಾರ್ಚ್/ಏಪ್ರಿಲ್-2019ರ ಮಾಹೆಯಲ್ಲಿ ನಡೆದ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ:10.05.2019 ರಂದು ಬೆಳಿಗ್ಗೆ 11:00 ಗಂಟೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ **ಆಂತರ್ಜಾಲ** **www.kseeb.kar.nic.in** ನಲ್ಲಿ ಪ್ರಕಟಿಸಲಾಗಿದೆ. ಸದರಿ ಫಲಿತಾಂಶದ ಹಾರ್ಡ್ ಪ್ರತಿಯನ್ನು ಸಂಬಂಧಿಸಿದ ಕಲಿಕಾ ಕೇಂದ್ರಗಳಿಗೆ Nodel Agency ಯಾದ ನಿರ್ದೇಶಕರು, ಜೆ.ಎಸ್.ಎಸ್ ಕರ್ನಾಟಕ ಮುಕ್ತ ವಿದ್ಯಾಲಯ, ಮೈಸೂರು ಇವರ ಮುಖಾಂತರ ಕಳುಹಿಸಲಾಗಿದೆ. ಫಲಿತಾಂಶವನ್ನು ಆಯಾ ಕಲಿಕಾ ಕೇಂದ್ರಗಳ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು.

ಸದರಿ ಫಲಿತಾಂಶವು ಪರೀಕ್ಷೆಯಲ್ಲಿ ದುರಾಚರಣೆ, ವಂಚನೆ, ಅನುಚಿತ ವರ್ತನೆ, ನಕಲು ಮಾಡಿರುವುದು ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.

**ಸದರಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರುಮೌಲ್ಯಮಾಪನಕ್ಕಾಗಿ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.**

| ವಿವರ | ದಿನಾಂಕ |
|---|---|
| ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 13.05.2019 |
| ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 21.05.2019 |
| ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 22.05.2019 |
| ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 30.05.2019 |

ಪ್ರಸ್ತುತ ಸಾಲಿನಿಂದ ನೇರವಾಗಿ ಮರುಎಣಿಕೆಗಾಗಿ ಅರ್ಜಿ ಸಲ್ಲಿಸುವಂತಿಲ್ಲ. ಮರುಎಣಿಕೆ ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆಯಬೇಕಾಗಿರುತ್ತದೆ. ಛಾಯಾಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಸದರಿ ಛಾಯಾಪ್ರತಿಯೊಂದಿಗೆ ಮಂಡಳಿಗೆ ಪತ್ರ ಬರೆದು ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಳಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಕಲಿಕಾ ಕೇಂದ್ರಕ್ಕೆ ಹಾಗೂ ಈ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ರವಾನಿಸಲಾಗುವುದು.

ಉತ್ತೀರ್ಣ ಅಥವಾ ಅನುತ್ತೀರ್ಣ ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ ಜರಾಕ್ಸ್ ಪ್ರತಿ ಬಯಸಿದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ವಿವರಗಳನ್ನು ಭರ್ತಿ ಮಾಡಿ ಮಂಡಳಿ ನಿಗಧಿಪಡಿಸಿದ ಶುಲ್ಕವನ್ನು NEFT CHALLAN ಮೂಲಕ ಪಾವತಿಸಿ ಮೇಲ್ಕಂಡ ವೇಳಾಪಟ್ಟಿಯಂತೆ, ಮಂಡಳಿಗೆ ಸಲ್ಲಿಸುವುದು. ನಿಗಧಿತ ಅವಧಿ ಮೀರಿ ಬಂದ ಅರ್ಜಿಗಳನ್ನು ಮಂಡಳಿ ಪರಿಗಣಿಸುವುದಿಲ್ಲ. ಜೊತೆಗೆ ಮಂಡಳಿಗೆ ಪಾವತಿಸಲಾದ ಮೊಬಲಗನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಛಾಯಾಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಪ್ರತ್ಯೇಕ ನಮೂನೆಗಳಿವೆ. ಆಯಾ ನಮೂನೆಗಳನ್ನು ಆಯಾ ವಿಷಯಕ್ಕೆ ಮಾತ್ರ ಬಳಸುವುದು. ಸದರಿ ನಮೂನೆಗಳನ್ನು ಮಂಡಳಿಯ **www.kseeb.kar.nic.in** ನಿಂದ ಪಡೆಯಬಹುದಾಗಿದೆ.

| ಶುಲ್ಕದ ವಿವರ | |
|---|---|
| ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ | ರೂ.300/– (ಮೂರು ನೂರು ರೂಪಾಯಿಗಳು) |
| ಮರುಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ ಶುಲ್ಕ | ರೂ.700/– (ಏಳು ನೂರು ರೂಪಾಯಿಗಳು) |

ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ 300/–ರಂತೆ ಜೆರಾಕ್ಸ್ ಪ್ರತಿ ಪಡೆಯಲು ಬಯಸುವ ಎಲ್ಲಾ ವಿಷಯಗಳಿಗೆ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ. ಮರುಮೌಲ್ಯಮಾಪನ ಶುಲ್ಕ ಒಂದು ವಿಷಯಕ್ಕೆ ರೂ.700/–ರಂತೆ ಮರುಮೌಲ್ಯಮಾಪನ ಬಯಸುವ ಎಲ್ಲಾ ವಿಷಯಗಳಿಗೂ ಶುಲ್ಕ ಪಾವತಿಸಬೇಕಾಗಿರುತ್ತದೆ. ಮಂಡಳಿಯಿಂದ ಛಾಯಾಪ್ರತಿ ಪಡೆಯದೇ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿ ಸಲ್ಲಿಸಿದಲ್ಲಿ ಅಂತಹ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಛಾಯಾಪ್ರತಿ ಮತ್ತು ಮರುಮೌಲ್ಯಮಾಪನದ ಅರ್ಜಿಗಳನ್ನು ಹಿರಿಯ ಸಹಾಯಕ ನಿರ್ದೇಶಕರು, ಕ್ಯೂ ಶಾಖೆ, 4ನೇ ಮಹಡಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇವರ ವಿಳಾಸಕ್ಕೆ ಸಲ್ಲಿಸಲು ತಿಳಿಸಿದೆ.

ಫಲಿತಾಂಶ ಪ್ರಕಟಣೆಯಾದ ನಂತರ ಈ ಕೆಳಕಂಡ ಅಂಶಗಳ ಆಧಾರದ ಮೇಲೆ ಆಯಾ ಕಲಿಕಾ ಕೇಂದ್ರಗಳ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಪರಿಶೀಲಿಸಲು ತಿಳಿಸಿದೆ.

➢ ಆಯಾ ಕಲಿಕಾ ಕೇಂದ್ರಗಳಿಗೆ ಸಂಬಂಧಿಸಿದ ಎಲ್ಲಾ ಪುನರಾವರ್ತಿತ ವಿದ್ಯಾರ್ಥಿಗಳ ಫಲಿತಾಂಶ ಬಂದಿದೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳುವುದು.

➢ ನಕಲು ವ್ಯವಹಾರದಲ್ಲಿ ತೊಡಗಿದ ವಿದ್ಯಾರ್ಥಿಗಳ ಫಲಿತಾಂಶಕ್ಕೆ "M" ಎಂದು ದಾಖಲಿಸಿ ಫಲಿತಾಂಶ ಪ್ರಕಟಿಸಲಾಗಿದೆ.

➢ ಒಂದು ವೇಳೆ ಯಾವುದಾದರೂ ವಿದ್ಯಾರ್ಥಿಗಳ ಫಲಿತಾಂಶ ಬಾರದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.

➢ ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದಾಖಲೆಗಳೊಂದಿಗೆ ಫಲಿತಾಂಶ ಪ್ರಕಟವಾದ ಹತ್ತು ದಿನಗಳೊಳಗಾಗಿ ಮಂಡಳಿಗೆ ಸಲ್ಲಿಸಿ ಸರಿಪಡಿಸಿಕೊಳ್ಳುವುದು.

➢ ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ವಿದ್ಯಾರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿ ಪ್ರತಿಯೊಬ್ಬ ವಿದ್ಯಾರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಆಯಾ ಕಲಿಕಾ ಕೇಂದ್ರಗಳ ಆವರಣದ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

(ಕೆ.ಎಸ್.ಮಣಿ)
ನಿರ್ದೇಶಕರು
(ಇತರೆ ಪರೀಕ್ಷೆಗಳು)

ಪ್ರತಿಯನ್ನು:

1. ಫಲಿತಾಂಶಪಟ್ಟಿಯನ್ನು ನಿರ್ದೇಶಕರು, ಜೆ.ಎಸ್.ಎಸ್ ಕರ್ನಾಟಕ ಮುಕ್ತ ವಿದ್ಯಾಲಯ, ಮೈಸೂರು ಇವರಿಗೆ ಕಳುಹಿಸುತ್ತಾ, ಆಯಾ ಕಲಿಕಾ ಕೇಂದ್ರಗಳಿಗೆ ಫಲಿತಾಂಶ ಪಟ್ಟಿಯನ್ನು ವಿತರಿಸಿ, ಸ್ವೀಕೃತಿ ಪಡೆಯಲು ಮತ್ತು ಸಕಾಲದಲ್ಲಿ ಫಲಿತಾಂಶ ಪ್ರಕಟಣೆಯಾಗುವಂತೆ ಸೂಚಿಸಲು ತಿಳಿಸಿದೆ.
2. ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಿದೆ.
3. ಕಛೇರಿ ಪ್ರತಿ.